ದಿಃ 05.06.2026

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 521/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರಂಗಸ್ವಾಮಿ | ಪ್ರಾ.ಸಾಃ5 |
| ತಂದೆಯ/ಗಂಡನ ಹೆಸರು | : | ಈರಪ್ಪ | ಚಾಸಾಃ5 |
| ವಯಸ್ಸು | : | 46 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ಆರ್.ಗೊಲ್ಲರಹಳ್ಳಿ | ದಿಃ05.06.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಚಾಸಾ.1 ರವರು ಗೊತ್ತು, ಚಾಸಾ.4 ಮತ್ತು 6 ರವರು ಗೊತ್ತು. ನ್ಯಾಯಾಲಯದ ಮುಂದಿರುವ ಆರೋಪಿತರು ಗೊತ್ತು. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ. ನಾನು ಯಾವುದೇ ಗಲಾಟೆಯನ್ನು ಬಿಡಿಸಿಲ್ಲ. ನಾನು ತನಿಖಾಧಿಕಾರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ. ಸಾಕ್ಷಿ ನಿಪಿ.2 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೊಲೀಸರು ನಾನು ನನ್ನ ಮನೆಯ ಬಳಿ ಹೋಗುತ್ತಿದ್ದಾಗ ನಾವು ಊರಿಗೆ ಬಂದಿದ್ದು, ಆ ಬಗ್ಗೆ ಸಹಿ ಮಾಡಿ ಎಂದು ಹೇಳಿ ನನ್ನಿಂದ ಸಹಿ ಪಡೆದಿದ್ದರು. ನನ್ನ ಸಮಕ್ಷಮ ಯಾವುದೇ ಮಹಜರಿನ ಕ್ರಮವನ್ನು ಜರುಗಿಸಿಲ್ಲ ಮತ್ತು ಯಾವುದೆ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿ ನಿಪಿ.3 ರ ಛಾಯಾಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಛಾಯಾಚಿತ್ರವನ್ನು ನಮ್ಮ ಊರಿನ ಕ್ಯಾಂಪಿನ ಬಳಿ ತೆಗೆದಿದ್ದರು. ಯಾವ ವಿಚಾರಕ್ಕಾಗಿ ತೆಗೆದಿದ್ದರು ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

2. ದಿ. 07.08.2023 ರಂದು ಸಂಜೆ 6 ಗಂಟೆಯ ಸಮಯದಲ್ಲಿ ನಾನು ಮತ್ತು ಚಾಸಾ.6 ರವರು ನಮ್ಮ ಗ್ರಾಮದ ಕ್ಯಾಂಪ್ ಬಳಿ ಚಂದ್ರಮ್ಮ ಕೋಂ ಚಿತ್ತಪ್ಪರವರ ಜಮೀನಿನ ಪಕ್ಕದ ಕಾಲುದಾರಿಯಲ್ಲಿ ನಡೆದುಕೊಂಡು ಬರುತ್ತಿರುವಾಗ ಚಾಸಾ.1 ಮತ್ತು ಅವರ ಅಣ್ಣನ

ದಿಃ 05.06.2026

ಮಗನಾದ ಚಾಸಾ.4 ರವರ ಜಮೀನಿನ ಬಳಿ ಬಂದಾಗ ಆರೋಪಿತರು ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ.1 ಮತ್ತು 4 ರವರಿಗೆ ಅವಾಚ್ಯ ಶಬ್ಧಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. 3 ನೇ ಆರೋಪಿ ಮು.ಮಾ.1 ಎಡೆಮಟ್ಟೆಯನ್ನು ತೆಗೆದುಕೊಂಡು ಬಂದು ಚಾಸಾ.1 ರವರ ಎಡಮೊಣಕಾಲಿಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಆರೋಪಿತರು ಸೇರಿಕೊಂಡು ಕೈ ಮತ್ತು ಕಾಲುಗಳಿಂದ ಹಲ್ಲೆ ಮಾಡಿ ಚಾಸಾ.1 ಮತ್ತು 4 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾ.6 ರವರು ಗಲಾಟೆಯನ್ನು ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಈ ಮೇಲ್ಕಂಡಂತೆ ನಾನು ತನಿಖಾಧಿಕಾರಿಗೆ ದಿ.08.08.2023 ರಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ.6 ಎಂದು ಗುರುತಿಸಲಾಯಿತು. ದಿ.08.08.2023 ರಂದು ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ನಾನು ಸ್ಥಳ ತೋರಿಸಿದ ಮೇರೆಗೆ ಚಾಸಾ.2 ಮತ್ತು 3 ರವರ ಸಮಕ್ಷಮ ಕೃತ್ಯ ನಡೆದ ಸ್ಥಳದಲ್ಲಿ ಮಹಜರನ್ನು ಜರುಗಿಸಿ ಮು.ಮಾ.1 ರ ಎಡಮಟ್ಟೆಯನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಮಹಜರಿನ ಸಮಯದಲ್ಲಿ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿ. ನನಗೆ ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ- ಇಲ್ಲ**

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು. )

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಹೊಳಲ್ಕೆರೆ